**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸಾತನೂರು ಗ್ರಾಮ ಪಂಚಾಯತಿ ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4), 48(5) ಮತ್ತು 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂ. ಗ್ರಾಅಪ 1135 ಗ್ರಾಪಂಅ 2018, ದಿನಾಂಕ 02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಇವರ ಪತ್ರ ಸಂ. ಪರಿಷತ್/ಸಿಆರ್/30/2018-19, ದಿನಾಂಕ 11.01.2019.
3. ಸರ್ಕಾರದ ಪತ್ರ ಸಂ. ಗ್ರಾಅಪ 79 ಗ್ರಾಪಂಅ 2019, ದಿನಾಂಕ 27.04.2019.
4. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ಪತ್ರ ಸಂ. ಪ್ರಾಆಕ/ಅಭಿವೃದ್ಧಿ/ಸಿಆರ್/28/2019-20, ದಿನಾಂಕ 28.11.2019.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ಇವರು ಬೆಂಗಳೂರು ಉತ್ತರ ತಾಲ್ಲೂಕಿನ ಸಾತನೂರು ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಶ್ರೀಮತಿ ಪ್ರಮೀಳಾ.ಟಿ. ಹಾಗೂ ಸದಸ್ಯರಾದ ಶ್ರೀ ಜಿಲಾನಿ, ಶ್ರೀಮತಿ ಶ್ವೇತಾ ಹಾಗೂ ಶ್ರೀ ಬಚ್ಚಪ್ಪ ರವರುಗಳು ದಿನಾಂಕ 27.03.2018, 21.06.2018, 07.07.018 ಹಾಗೂ ದಿನಾಂಕ 06.09.2018 ರಂದು ಸತತವಾಗಿ ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ 04 ಬಾರಿ ಗೈರು ಹಾಜರಾಗಿದ್ದು, ಇವರುಗಳ ವಿರುದ್ಧ ಕನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ, 1993ರ ಪ್ರಕರಣ 43(ಎ)iii ರಂತೆ ಸದಸ್ಯತ್ವವನ್ನು ರದ್ದುಪಡಿಸುವ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಉತ್ತರ ತಾಲ್ಲೂಕು ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರದ ಅವಗಾಹನೆಗೆ ಸಲ್ಲಿಸಿದ್ದರು.

ಮೇಲೆ ಓದಲಾದ (1)ರ ಸರ್ಕಾರಿ ಆದೇಶ ಹಾಗೂ ಓದಲಾದ (3)ರ ಸರ್ಕಾರಿ ಪತ್ರದನ್ವಯ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರು ಮೇಲೆ ಓದಲಾದ ಕ್ರ.ಸಂ.(4)ರ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯ ಸಂಗಡ ವಿಚಾರಣಾ ವರದಿಯಲ್ಲಿ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸಾತನೂರು ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಶ್ರೀಮತಿ ಪ್ರಮೀಳಾ.ಟಿ. ಹಾಗೂ ಸದಸ್ಯರುಗಳಾದ ಶ್ರೀ ಜಿಲಾನಿ, ಶ್ರೀಮತಿ ಸೌಭಾಗ್ಯ, ಶ್ರೀಮತಿ ದಿವ್ಯಭಾರತಿ, ಶ್ರೀಮತಿ ಶ್ವೇತಾ ಹಾಗೂ ಶ್ರೀ ಬಚ್ಚಪ್ಪರವರು ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗೆ ಸತತವಾಗಿ 4 ಬಾರಿ ಗೈರು ಹಾಜರಾಗಿರುವ ಮೇರೆಗೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ & ಪಂ.ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಕುರಿತು ಸರ್ಕಾರದ ಪತ್ರ ದಿನಾಂಕ: 27.4.2019 ಮತ್ತು 02.02.2019ರ ಸರ್ಕಾರಿ ಆದೇಶದಂತೆ ವಿಚಾರಣೆ ಮಾಡಿ ವಿಚಾರಣಾ ವರದಿಯನ್ನು ಅಗತ್ಯ ಕ್ರಮಕ್ಕಾಗಿ ಕಳುಹಿಸಿರುತ್ತಾರೆ.

ವಿಚಾರಣಾ ವರದಿಯಲ್ಲಿ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸಾತನೂರು ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಶ್ರೀಮತಿ ಪ್ರಮೀಳಾ.ಟಿ. ಹಾಗೂ ಸದಸ್ಯರುಗಳಾದ ಶ್ರೀ ಜಿಲಾನಿ,

ಶ್ರೀಮತಿ ಸೌಭಾಗ್ಯ, ಶ್ರೀಮತಿ ದಿವ್ಯಭಾರತಿ, ಶ್ರೀಮತಿ ಶ್ವೇತಾ ಹಾಗೂ ಶ್ರೀ ಬಚ್ಚಪ್ಪರವರು ದಿನಾಂಕ: 27.3.2018, 21.06.2018, 7.7.2018 ಹಾಗೂ 06.09.2018 ರಂದು ಸತತವಾಗಿ 4 ಬಾರಿ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗೆ ಗೈರು ಹಾಜರಾದ ಹಿನ್ನೆಲೆಯಲ್ಲಿ ಇವರುಗಳ ವಿರುದ್ಧ ಇರುವ ದೂರಿನ ಬಗ್ಗೆ ಸದರಿಯವರಿಗೆ ನೋಟೀಸ್ ನೀಡಿ ದಿನಾಂಕ: 08.07.2019, 26.07.2019 ಹಾಗೂ 08.11.2019 ರಂದು ವಿಚಾರಣೆ ಮಾಡಿ ಹೇಳಿಕೆ ಪಡೆಯಲಾಗಿರುತ್ತದೆ. ಸದರಿಯವರ ವಿರುದ್ಧ ಇರುವ ದೂರಿನ ಬಗ್ಗೆ ಅವರು ಕೊಟ್ಟ ಉತ್ತರವನ್ನು ಪರಿಶೀಲಿಸಲಾಯಿತು. ಸದರಿಯವರ ಹೇಳಿಕೆಗಳು ಒಂದೇ ರೀತಿಯಲ್ಲಿದ್ದು, ಸಮಂಜಸವಾದ ಉತ್ತರ ನೀಡಿರುವುದಿಲ್ಲ. ಸಭೆ ರದ್ದಾದುದರಿಂದ ಸಭೆಗೆ ಹಾಜರಾಗಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಈ ಬಗ್ಗೆ ಸಮರ್ಪಕ ಸಮಜಾಯಿಷಿ ನೀಡದೇ ಇರುವುದರಿಂದ ಒಪ್ಪಲು ಸಾಧ್ಯವಿಲ್ಲ. ಶ್ರೀಮತಿ ಸೌಭಾಗ್ಯ, ಶ್ರೀಮತಿ ದಿವ್ಯಭಾರತಿ, ಶ್ರೀಮತಿ ಎಂ.ಶ್ವೇತಾ ಇವರುಗಳು ತಮ್ಮನ್ನು ಸಭೆಗೆ ಹಾಜರಾಗದಂತೆ ತಡೆದಿರುತ್ತಾರೆ ಎಂದು ತಿಳಿಸಿದ್ದು, ಈ ಬಗ್ಗೆ ಈ ಸದಸ್ಯರುಗಳು ಯಾವುದೇ ಎಫ್.ಐ.ಆರ್/ದೂರನ್ನು ದಾಖಲಿಸಿರುವುದು ಕಂಡುಬರುತ್ತಿಲ್ಲವಾದ್ದರಿಂದ ಇವರ ಸಮಜಾಯಿಷಿಯನ್ನು ಒಪ್ಪಲು ಸಾಧ್ಯವಿಲ್ಲ. ಸತತವಾಗಿ 4 ಬಾರಿ ಗೈರು ಹಾಜರಾದ ಕಾರಣ ಕೋರಂ ಕೊರತೆಯಿಂದ ಸಭೆ ರದ್ದಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ತೊಡಕಾಗಿರುವುದಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ಉತ್ತರ ತಾ. ಯಲಹಂಕರವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡಿರುವ ವರದಿಯಿಂದ ಕಂಡುಬಂದಿರುತ್ತದೆ. ವಿಚಾರಣಾ ವೇಳೆಯಲ್ಲಿ ಸಾತನೂರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನೀಡಿರುವ ವರದಿಯಲ್ಲಿ ಸಾತನೂರು ಗ್ರಾ.ಪಂ. ಉಪಾಧ್ಯಕ್ಷರಾದ ಶ್ರೀಮತಿ ಪ್ರಮೀಳಾ.ಟಿ., ಸದಸ್ಯರುಗಳಾದ ಶ್ರೀ ಎ.ಕೆ.ಜಿಲಾನಿ, ಶ್ರೀಮತಿ ಸೌಭಾಗ್ಯ, ಶ್ರೀಮತಿ ದಿವ್ಯಭಾರತಿ, ಶ್ರೀಮತಿ ಶ್ವೇತಾ ಹಾಗೂ ಶ್ರೀ ಕೆ.ಬಚ್ಚಪ್ಪರವರು ಸತತವಾಗಿ 4 ಬಾರಿ ಪಂಚಾಯತಿ ಸಭೆಗೆ ಗೈರು ಹಾಜರಾಗಿರುವುದು ದಾಖಲೆಗಳಿಂದ ದೃಢಪಟ್ಟಿರುತ್ತದೆ. ಆದಕಾರಣ, ಸಾತನೂರು ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಶ್ರೀಮತಿ ಪ್ರಮೀಳಾ.ಟಿ. ಹಾಗೂ ಸದಸ್ಯರುಗಳಾದ ಶ್ರೀ ಜಿಲಾನಿ, ಶ್ರೀಮತಿ ಸೌಭಾಗ್ಯ, ಶ್ರೀಮತಿ ದಿವ್ಯಭಾರತಿ, ಶ್ರೀಮತಿ ಎಂ.ಶ್ವೇತಾ ಹಾಗೂ ಶ್ರೀ ಬಚ್ಚಪ್ಪರವರ ವಿರುದ್ಧ ಕರ್ನಾಟಕ ಪಂ.ರಾಜ್ ಅಧಿನಿಯಮ, 1993ರ ಕಲಂ 43(ಎ)(iii) ರನ್ವಯ ಕ್ರಮಕೈಗೊಳ್ಳಬಹುದಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ವರದಿಯನ್ವಯ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸಾತನೂರು ಗ್ರಾಮ ಪಂಚಾಯತಿಯ 4 ಸತತ ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವ ಸದರಿ ಗ್ರಾಮ ಪಂಚಾಯತಿಯ ಉಪಾಧ್ಯಕ್ಷರಾದ ಶ್ರೀಮತಿ ಪ್ರಮೀಳಾ.ಟಿ. ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ & ಪಂ.ರಾಜ್ ಅಧಿನಿಯಮ, 1993ರ ಪ್ರಕರಣ 48(4) ಮತ್ತು 48(5) ರನ್ವಯ ಹಾಗೂ ಸದಸ್ಯರುಗಳಾದ ಶ್ರೀ ಜಿಲಾನಿ, ಶ್ರೀಮತಿ ಸೌಭಾಗ್ಯ, ಶ್ರೀಮತಿ ದಿವ್ಯಭಾರತಿ, ಶ್ರೀಮತಿ ಶ್ವೇತಾ ಹಾಗೂ ಶ್ರೀ ಬಚ್ಚಪ್ಪರವರು ಇವರುಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ & ಪಂ.ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಸದರಿ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1068ಗ್ರಾಪಂಅ/2019</u>**

**<u>ಬೆಂಗಳೂರು, ದಿನಾಂಕ:27.01.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸಾತನೂರು ಗ್ರಾಮ ಪಂಚಾಯತಿಯ 4 ಸತತ ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವ ಸದರಿ ಗ್ರಾಮ ಪಂಚಾಯತಿಯ ಉಪಾಧ್ಯಕ್ಷರಾದ ಶ್ರೀಮತಿ ಪ್ರಮೀಳಾ.ಟಿ. ಇವರನ್ನು

ಕರ್ನಾಟಕ ಗ್ರಾಮ ಸ್ವರಾಜ್ & ಪಂ.ರಾಜ್ ಅಧಿನಿಯಮ, 1993ರ ಪ್ರಕರಣ 48(4) ಮತ್ತು 48(5) ರನ್ವಯ ಸಾತನೂರು ಗ್ರಾಮ ಪಂಚಾಯತಿಯ ಉಪಾಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ಹಾಗೂ ಸದಸ್ಯರುಗಳಾದ ಶ್ರೀ ಜಿಲಾನಿ, ಶ್ರೀಮತಿ ಸೌಭಾಗ್ಯ, ಶ್ರೀಮತಿ ದಿವ್ಯಭಾರತಿ, ಶ್ರೀಮತಿ ಶ್ವೇತಾ ಹಾಗೂ ಶ್ರೀ ಬಚ್ಚಪ್ಪ ರವರುಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ & ಪಂ.ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ರನ್ವಯ ಸಾತನೂರು ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar
(ಬಿ. ನವೀನ್‌ಕುಮಾರ್) 27/1/2020
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ.) (ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸಾತನೂರು ಗ್ರಾಮ ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5) ಸಂಬಂಧಿಸಿದವರಿಗೆ–ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು ಇವರ ಮುಖಾಂತರ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
7) ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

